ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	20(88)
ಮಾನ್ಯ ಸದಸ್ಯರ ಹೆಸರು	ಶ್ರೀ ಆರ್.ಧರ್ಮಸೇನ(ಸ್ಥಳಿಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	21-09-2020
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಮುಗಿಸಿ ಉದ್ಯೋಗಕ್ಕಾಗಿ ಕಾಯುತ್ತಿರುವವರ ಸಂಖ್ಯೆ ಎಷ್ಟು; ಲಕ್ಷಾಂತರ ರೂಪಾಯಿ ಸಾಲ ಮಾಡಿ ಶಿಕ್ಷಣ ಪಡೆದ ಯುವಕ ಯುವತಿಯರು ನಿರುದ್ಯೋಗಿಗಳಾಗಿದ್ದು, ಆರ್ಥಿಕ ಸಂಕಷ್ಟದಲ್ಲಿರುವುದರಿಂದ ಉದ್ಯೋಗಗಳನ್ನು ಸೃಷ್ಟಿಸಿ ಇವರನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೆ;	2019-2020 ಸಾಲಿನಲ್ಲಿ ವೈದ್ಯಕೀಯ ಶಿಕ್ಷಣವನ್ನು ಪೂರ್ಣಗೊಳಿಸಿರುವವರ ಸಂಖ್ಯೆ.6810. UG(Medical)- 4824. PG(Medical) -1986). ಸರ್ಕಾರದ ಅಧಿಸೂಚನೆ ಸಂಖ್ಯೆ ಆಕುಕ 71 ಹೆಚ್.ಎಸ್.ಹೆಚ್ 2019 ದಿನಾಂಕ 16.06.2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ 25.08.2020 ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ತಜ್ಞ ವೈದ್ಯರು, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹಾಗೂ ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿಮಾಡಲು ಅಂತಿಮ ನೇಮಕಾತಿ ನಿಯಮಗಳನ್ನು ಹೊರಡಿಸಲಾಗಿರುತ್ತದೆ. ಇದರನ್ವಯ ದಿನಾಂಕ: 10.09.2020 ರಂದು ಅಧಿಸೂಚನೆ ಹೊರಡಿಸಿ ಆನ್ ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿರುತ್ತದೆ.
ಆ	ವೈದ್ಯರ ಕೊರತೆಯಿರುವ ಈ ಸಂದರ್ಭದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಹೊಸದಾಗಿ ವೈದ್ಯರುಗಳನ್ನು ಎಷ್ಟು ದಿವಸಗಳಲ್ಲಿ ನೇಮಕಾತಿ ಮಾಡಲಾಗುವುದು;	ತಜ್ಞ ವೈದ್ಯರು, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿಮಾಡಲು ಈಗಾಗಲೇ ದಿನಾಂಕ 10.09.2020 ರಂದು ವಿಶೇಷ ನೇಮಕಾತಿ ಸಮಿತಿಯಿಂದ ಅಧಿಸೂಚನೆ ಹೊರಡಿಸಲಾಗಿದ್ದು, ದಿನಾಂಕ 16.09.2020 ರಿಂದ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆಯು ಚಾಲನೆಯಲ್ಲಿರುತ್ತದೆ.
ಇ	ವಿಶೇಷ ನೇಮಕಾತಿಗಳನ್ನು ಮಾಡಲು ಯಾವುದಾದರೂ ಕಾರ್ಯಕ್ರಮ ಕೈಗೊಳ್ಳಲಾಗುವುದೇ?	ಸರ್ಕಾರದ ಅಧಿಸೂಚನೆ ಸಂಖ್ಯೆ ಆಕುಕ 71 ಹೆಚ್ಎಸ್ಹೆಚ್ 2019 ದಿನಾಂಕ 16.06.2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ 25.08.2020 ರಲ್ಲಿ ತಜ್ಞ ವೈದ್ಯರು, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿಮಾಡಲು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಿದ್ದು ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ದಿನಾಂಕ:10.09.2020ರಂದು ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಸಂಖ್ಯೆ:ಆಕುಕ 46 ಹೆಚ್ ಎಸ್ ಡಿ 2020

(ಬಿ. ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು